ಬಿಡುಗಡೆಯಾಗಿದ್ದು, ಅನುಮೋದಿತ ಕ್ರಿಯಾ ಯೋಜನೆಯಂತೆ ರಸ್ತೆ ದುರಸ್ತಿ / ನಿರ್ವಹಣೆ ಕಾಮಗಾರಿಗಳನ್ನು ಕೈಗೊಂಡು ಮಾರ್ಚ್–2012 ಅಂತ್ಯದೊಳಗೆ ಜಿಲ್ಲಾ ಪಂಚಾಯತ್ ವತಿಯಿಂದ ಪೂರ್ಣಗೊಳಿಸಲಾಗುವುದು.

ಸರ್ಕಾರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಮಂಜೂರಾತಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 132 (131)

ಸದಸ್ಯರ ಹೆಸರು : ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಕನಹಳ್ಳಿ)

ಉತ್ತರಿಸುವ ಸಚಿವರು : ಡಾ. ವಿ.ಎಸ್.ಆಚಾರ್ಯ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಕೇಂದ್ರವು ಡಾ.ನಂಜುಂಡಪ್ಪ ವರದಿಯನ್ವಯ ಅತಿ ಹಿಂದುಳಿದ ತಾಲ್ಲೂಕು ಕೇಂದ್ರವಾಗಿದ್ದು, ಇಲ್ಲಿ ಸರ್ಕಾರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜಿನ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಸಾಲಿನಲ್ಲಿ ಹೊಸ ಸರ್ಕಾರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡಲು ಸರ್ಕಾರ ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದೇ?

ಇ) ಸದರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜುಗಳನ್ನು ನಿರ್ಮಿಸಲು ಕಟ್ಟಡಕ್ಕೆ ಸ್ಥಳ ಗುರುತಿಸಿ, ಭೂಸ್ವಾಧೀನಪಡಿಸಿಕೊಳ್ಳಲಾಗಿದೆಯೇ?

ಈ) ಹಾಗಿದ್ದಲ್ಲಿ, ನಗರದ ಯಾವ ಭಾಗದಲ್ಲಿ ಸ್ಥಳ ಗುರುತಿಸಿ ಭೂಸ್ವಾಧೀನಪಡಿಸಿಕೊಳ್ಳಲಾಗಿದೆ?

ಉತ್ತರಗಳು:

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಸರ್ಕಾರಿ ಸ್ವತಂತ್ರ ಪದವಿಪೂರ್ವ ಕಾಲೇಜು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಕೊಠಡಿಗಳನ್ನು ನಿರ್ಮಿಸುವ ಕುರಿತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 134 (133)

ಸದಸ್ಯರ ಹೆಸರು : ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕಹಳ್ಳಿ ಕ್ಷೇತ್ರ)

ಉತ್ತರಿಸುವ ಸಚಿವರು : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ತುಮಕೂರು ಜಿಲ್ಲೆ ಚಿಕ್ಕನಾಯಕನ ಹಳ್ಳಿ ತಾಲ್ಲೂಕು ಕೇಂದ್ರದಲ್ಲಿರುವ ಸರ್ಕಾರಿ ಸ್ವತಂತ್ರ ಪದವಿಪೂರ್ವ ಕಾಲೇಜು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಹೆಚ್ಚುವರಿ ಕೊಠಡಿಗಳ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಕಾಲೇಜುಗಳ ಮೇಲಂತಸ್ಥಿನಲ್ಲಿ ಕೊಠಡಿಗಳ ನಿರ್ಮಾಣಕ್ಕೆ ಈ ಸಾಲಿನ ಬಜೆಟ್‌ನಲ್ಲಿ ಅನುದಾನ ಬಿಡುಗಡೆ ಮಾಡಿ ಕೊಠಡಿಗಳನ್ನು ನಿರ್ಮಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಉತ್ತರಗಳು:

ಅ) ತುಮಕೂರು ಜಿಲ್ಲೆ ಚಿಕ್ಕನಾಯಕಹಳ್ಳಿ, ಸರ್ಕಾರಿ ಪದವಿಪೂರ್ವ ಕಾಲೇಜಿಗೆ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಅನುದಾನದ ಲಭ್ಯತೆಯನ್ನಾಧರಿಸಿ ಹಾಗೂ ಅವಶ್ಯಕತೆಗನುಗುಣವಾಗಿ ಕೊಠಡಿಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗುವುದು.